ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕೃಷಿ ಮತ್ತು ಕೈಗಾರಿಕೆ (ಕೇಂದ್ರ)

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE 21/6/20

ನೇಗಿಲ ಯೋಗಿಗೆ ಬಲ

ಕೇಂದ್ರ ಸಂಪುಟ ಸಭೆಯಲ್ಲಿ ಕೃಷಿ ಕ್ಷೇತ್ರ, ಎಂಎಸ್‌ಎಂಇಗೆ ಮತ್ತಷ್ಟು ಕೊಡುಗೆ
ರೈತರ ಬೆಳೆಗಳಿಗೆ ಬೆಂಬಲ ಬೆಲೆ ಘೋಷಣೆ | ಆದಾಯ ಹೆಚ್ಚಿಸಲು ಕ್ರಮ

ನವದೆಹಲಿ: ಕೊರೊನಾದಿಂದ ಕುಸಿದಿದ್ದ ದೇಶದ ಆರ್ಥಿಕತೆಯನ್ನು ಮೇಲೆತ್ತಲು, ಬಸವಳಿದಿದ್ದ ಜನರ ಆತ್ಮಸ್ಥೈರ್ಯವನ್ನು ಹೆಚ್ಚಿಸಲು ಕೆಲದಿನಗಳ ಹಿಂದಷ್ಟೇ 20 ಲಕ್ಷ ಕೋಟಿ ರೂ. ಆರ್ಥಿಕ ಪ್ಯಾಕೇಜ್ ಘೋಷಿಸಿದ್ದ ಕೇಂದ್ರ ಸರ್ಕಾರ, ಮತ್ತೆ ಅನ್ನದಾತನ ಕಷ್ಟಗಳನ್ನು ದೂರಾಗಿಸಲು ಹಾಗೂ ದುಡಿಯುವ ಕೈಗಳಿಗೆ ಮತ್ತಷ್ಟು ಶಕ್ತಿ ತುಂಬಲು ಮುಂದಾಗಿದೆ.

ನವದೆಹಲಿಯಲ್ಲಿ ಸೋಮವಾರ ನಡೆದ ಕೇಂದ್ರ ಸಂಪುಟದ ಸಭೆಯಲ್ಲಿ ಇದಕ್ಕಾಗಿ ಕೆಲವಾರು ಐತಿಹಾಸಿಕ ನಿರ್ಧಾರಗಳನ್ನು ಕೈಗೊಳ್ಳಲಾಗಿದೆ. ಅಂದ ಹಾಗೆ ಕೇಂದ್ರದಲ್ಲಿ ಮೋದಿ 2.0 ಸರ್ಕಾರ ಒಂದು ವರ್ಷ ಪೂರೈಸಿ 2ನೇ ವರ್ಷಕ್ಕೆ ಕಾಲಿಟ್ಟ ನಂತರ ನಡೆದ ಮೊದಲ ಸಂಪುಟ ಸಭೆಯಿದು. ಈ ಸಭೆಯಲ್ಲಿ 'ಹಳ್ಳಿಗಳು, ಬಡವ ಮತ್ತು ರೈತ' ಎಂಬ ಪರಿಕಲ್ಪನೆಯಡಿ ರೈತರ 14 ಖಾರಿಫ್ ಬೆಳೆಗಳಿಗೆ ಬೆಂಬಲ ಬೆಲೆಯನ್ನು ಹೆಚ್ಚಿಸುವ ನಿರ್ಧಾರವನ್ನೂ ಸಭೆಯಲ್ಲಿ ತೆಗೆದುಕೊಳ್ಳಲಾಗಿದೆ.

▶ 6ನೇ ಪುಟಕ್ಕೆ

ಕೃಷಿ ಕ್ಷೇತ್ರಕ್ಕೆ ಹೊಸ ಲಾಭ

1. ಕನಿಷ್ಠ ಬೆಂಬಲ ಬೆಲೆ ಹೆಚ್ಚಳ

ಸೋಮವಾರದ ಸಂಪುಟ ಸಭೆಯಲ್ಲಿ ಕೈಗೊಂಡ ತೀರ್ಮಾನಗಳು ಸ್ವಾವಲಂಬಿ ಭಾರತ ನಿರ್ಮಾಣಕ್ಕೆ ಹೆಚ್ಚಿನ ಒತ್ತು ನೀಡಲಿವೆ. ರೈತರಿಗೆ, ಬೀದಿ ವ್ಯಾಪಾರಿಗಳಿಗೆ, ಎಂಎಸ್‌ಎಂಇ ಕ್ಷೇತ್ರಕ್ಕೆ ಈ ಮೂಲಕ ಹೆಚ್ಚಿನ ಶಕ್ತಿ ತುಂಬಲಾಗಿದೆ. ರೈತರ ಆದಾಯವನ್ನು ಒಂದೂವರೆ ಪಟ್ಟು ಹೆಚ್ಚಿಸುವುದರ ಜೊತೆಗೆ, ಈ ಹಿಂದೆ ನೀಡಿದ್ದ ವಾಗ್ದಾನವನ್ನು ಈಡೇರಿಸಲು ಕ್ರಮ ಕೈಗೊಳ್ಳಲಾಗಿದೆ.

■ ನರೇಂದ್ರ ಮೋದಿ, ಪ್ರಧಾನಿ